# Akashvani : Bangalore
# Regional Bulletin In Kannada
# 16.05.2025 / 18.40 hrs
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ಹಣಕಾಸಿನ ಸಮಸ್ಯೆ ಇಲ್ಲ - ಮುಖ್ಯಮಂತ್ರಿ
- ಕನಿಷ್ಠ ಬೆಂಬಲ ಬೆಲೆಯಲ್ಲಿ ಸೂರ್ಯಕಾಂತಿ ಖರೀದಿ ಪ್ರಕ್ರಿಯೆ ಶೀಘ್ರ ಆರಂಭ
- ಗ್ರಾಮ ಪಂಚಾಯಿತಿಗಳಿಂದ ಒಂದು ಸಾವಿರದ ೨೭೧ ಕೋಟಿ ರೂಪಾಯಿ ದಾಖಲೆ ಆಸ್ತಿ ತೆರಿಗೆ ಸಂಗ್ರಹ
- ದೇಶದ ಸೈನಿಕರಿಗೆ ಗೌರವ ಸಲ್ಲಿಸಲು ತಿರಂಗಾ ಯಾತ್ರೆ

<><*<><>*><>

ಗ್ಯಾರಂಟಿ ಯೋಜನೆಗಳ ಜಾರಿಗೆ ಹಣಕಾಸಿನ ಸಮಸ್ಯೆ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಹೊಸಪೇಟೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ವರ್ಷದಂತೆ ಗ್ಯಾರಂಟಿ ಯೋಜನೆಗಳಿಗಾಗಿ ಈ ವರ್ಷವೂ ಬಜೆಟ್‌ನಲ್ಲಿ ಹಣ ಮೀಸಲಿಡಲಾಗಿದೆ ಎಂದರು.

ಧ್ವನಿ - ಮುಖ್ಯಮಂತ್ರಿ ಸಿದ್ದರಾಮಯ್ಯ

ಸರ್ಕಾರ ೨ ವರ್ಷ ಪೂರೈಸಿದ ಸಂದರ್ಭದಲ್ಲಿ ಸಾಧನಾ ಸಮಾವೇಶವನ್ನು ಇದೇ ೨೦ ರಂದು ಹೊಸಪೇಟೆಯಲ್ಲಿ ಆಯೋಜಿಸಲಾಗುತ್ತಿದೆ. ಸಮಾವೇಶದಲ್ಲಿ ಒಂದು ಲಕ್ಷ ಫಲಾನುಭವಿಗಳಿಗೆ ಹಕ್ಕುಪತ್ರ ನೀಡಲಾಗುವುದು. ಆಡಳಿತಾತ್ಮಕ ದೃಷ್ಟಿಯಿಂದ ಬೆಂಗಳೂರು ಮಹಾನಗರ ಪಾಲಿಕೆಯನ್ನು ಮೂರು ಅಥವಾ ಅದಕ್ಕಿಂತ ಹೆಚ್ಚು ಪಾಲಿಕೆಗಳನ್ನಾಗಿ ವಿಭಜನೆ ಮಾಡಬೇಕು ಎಂದು ಬಿ ಎಸ್ ಪಾಟೀಲ್, ಸಿದ್ದಯ್ಯ ಅವರನ್ನು ಒಳಗೊಂಡ ಸಮಿತಿ ಸರ್ಕಾರಕ್ಕೆ ಶಿಫಾರಸ್ಸು ಮಾಡಿತ್ತು. ಅದರ ಅನ್ವಯ ಕ್ರಮ ತೆಗೆದುಕೊಳ್ಳಲಾಗುತ್ತಿದೆ ಎಂದರು. ಅಕ್ರಮ ಗಣಿಗಾರಿಕೆ ಮಾಡುತ್ತಿರುವವರಿಗೆ ಶಿಕ್ಷೆಯಾಗಬೇಕು ಮತ್ತು ಅಕ್ರಮ ಗಣಿಗಾರಿಕೆ ನಿಲ್ಲಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

<><*<><>*><>

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಹಿಂಗಾರು ಹಂಗಾಮಿಗೆ ಸೂರ್ಯಕಾಂತಿ ಖರೀದಿಗೆ ಕೇಂದ್ರ ಅನುಮತಿ ನೀಡಿದ್ದು, ಶೀಘ್ರ ಖರೀದಿ ಆರಂಭಿಸಲಾಗುವುದು ಎಂದು ಕೃಷಿ ಮಾರುಕಟ್ಟೆ ಸಚಿವ ಶಿವನಂದಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿ ಕ್ವಿಂಟಾಲಿಗೆ ೭ ಸಾವಿರದ ೨೮೦ ರೂಪಾಯಿ ನಿಗದಿಪಡಿಸಲಾಗಿದೆ. ಬಾಗಲಕೋಟೆ, ಬಳ್ಳಾರಿ, ವಿಜಯಪುರ, ಚಾಮರಾಜನಗರ, ಚಿತ್ರದುರ್ಗ, ಗದಗ, ಕಲಬುರಗಿ, ವಿಜಯನಗರ ಹಾಗೂ ರಾಯಚೂರು ಜಿಲ್ಲೆಗಳಲ್ಲಿ ಖರೀದಿ ಕೇಂದ್ರ ತೆರೆಯಲಾಗುವುದು ಎಂದರು. ಪ್ರತಿ ಎಕರೆಗೆ ೪ ಕ್ವಿಂಟಾಲ್‌ನಂತೆ ಗರಿಷ್ಠ ೨೦ ಕ್ವಿಂಟಾಲ್ ಖರೀದಿ ಮಾಡಲಾಗವುದು. ಆದೇಶ ಹೊರಡಿಸಿದ ೯೦ ದಿನಗಳವರೆಗೆ ಖರೀದಿ ಪ್ರಕ್ರಿಯೆ ನಡೆಯಲಿದೆ ಎಂದು ಸಚಿವರು ಸ್ಪಷ್ಟಪಡಿಸಿದರು.

<><*<><>*><>

ಹಂತ ಹಂತವಾಗಿ ಕರ್ನಾಟಕಕ್ಕೆ ಎಲೆಕ್ಟ್ರಿಕ್ ಬಸ್‌ಗಳನ್ನು ಹಂಚಿಕೆ ಮಾಡುವುದಾಗಿ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಭರವಸೆ ನೀಡಿದ್ದಾರೆ.  ಪ್ರಮುಖ ನಗರಗಳಲ್ಲಿ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಮತ್ತಷ್ಟು ಸುಧಾರಿಸಲು ಬೇಕಾದ ವ್ಯವಸ್ಥೆ ಮಾಡುವಂತೆ ಸಾರಿಗೆ ಸಚಿವ ರಾಮಲಿಂಗರೆಡ್ಡಿ ಮಾಡಿದ ಮನವಿಗೆ ಕೇಂದ್ರ ಸಚಿವರು ಸಕಾರಾತ್ಮಕವಾಗಿ ಪ್ರತಿಕ್ರಿಯಿಸಿದ್ದಾರೆ. ೯ ಪ್ರಮುಖ ನಗರಗಳಿಗೆ ೧೪ ಸಾವಿರ ವಿದ್ಯುತ್ ಬಸ್‌ಗಳನ್ನು ಹಂಚಿಕೆ ಮಾಡಲಾಗುವುದು. ಕೇಂದ್ರ ಸರ್ಕಾರ ಎಲ್ಲಾ ಮಹಾನಗರಗಳಲ್ಲಿ ಸುಗಮ ಸಂಚಾರಕ್ಕೆ ಆದ್ಯತೆ ನೀಡುತ್ತಿದ್ದು, ಅದರಂತೆ ಮಹಾನಗರಗಳಲ್ಲಿ ಸಂಚಾರ ವ್ಯವಸ್ಥೆ ಸುಧಾರಿಸಲು ವಿದ್ಯುತ್ ಬಸ್‌ಗಳನ್ನು ಒದಗಿಸಲಾಗುವುದು ಎಂದು ಕೇಂದ್ರ ಸಚಿವರು ಹೇಳಿದರು.

<><*<><>*><>

ಗ್ರಾಮ ಪಂಚಾಯಿತಿ ಮೂಲಕ ೧ ಸಾವಿರದ ೨೭೧ ಕೋಟಿ ರೂಪಾಯಿ ಆಸ್ತಿ ತೆರಿಗೆ ಸಂಗ್ರಹಿಸಿ ದಾಖಲೆ ಬರೆಯಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಬೆಂಗಳೂರಿನಲ್ಲಿಂದು ಪಂಚಾಯತ್ ರಾಜ್ ಖಾತೆ ಸಚಿವ ಪ್ರಿಯಾಂಕ ಖರ್ಗೆ ಹೇಳಿದ್ದಾರೆ. ಗ್ರಾಮೀಣ ಕರ್ನಾಟಕ ಕುಡಿಯುವ ನೀರು ಸ್ಥಿತಿ ಗತಿ ಕುರಿತು ಏರ್ಪಡಿಸಿದ್ದ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.    , ಕಾಯಕ ಗ್ರಾಮ ಯೋಜನೆಯಡಿ ದುರ್ಬಲ ಗ್ರಾಮ ಪಂಚಾಯಿತಿಗಳನ್ನು ದತ್ತು ಪಡೆದು ಸಮಗ್ರವಾಗಿ ಅಭಿವೃದ್ಧಿಪಡಿಸಬೇಕು. £Àಗ್ರಾಮಗಳ ಸುಧಾರಣೆ ಆರ್ಥಿಕ ಸುಸ್ಥಿರತೆ ಬಗ್ಗೆ ಮುಖ್ಯ ಕಾರ್ಯನಿರ್ವಹಾಧಿಕಾರಿಗಳು ವರಮಾನ ಹೆಚ್ಚಿಸುವ ಬಗ್ಗೆ ಅಧಿಕಾರಿಗಳು ಸ್ವತಂತ್ರವಾಗಿ ಆಲೋಚನೆ ಮಾಡಬೇಕು ಎಂದರು. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ. ಅತೀಕ್ ಮಾತನಾಡಿ, ನದಿ ಮೂಲ ಅವಲಂಭಿಸಿ ಕುಡಿಯುವ ನೀರು ಯೋಜನೆ ಅನುಷ್ಠಾನ ಮಾಡಲಾಗುತ್ತಿದೆ.  ಮಳೆಗಾಲ ಹೊರತುಪಡಿಸಿ ಇತರೆ ಸಮಯದಲ್ಲಿ ನದಿಗಳಲ್ಲಿ ನೀರಿನ ಹರಿವಿನ ಪ್ರಮಾಣ ಕಡಿಮೆಯಾಗಿರುತ್ತದೆ. ಇದರಿಂದ ನೀರು ಕಲುಷಿತವಾಗುವ ಸಂಭವ ಹೆಚ್ಚಾಗಿದ್ದು, ಅದ್ದರಿಂದ ನಿಯಮಿತವಾಗಿ ನೀರನ್ನು ಪರೀಕ್ಷೆ ಮಾಡಿ ಸರಬರಾಜು ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

<><*<><>*><>

ಕಾಂಗ್ರೆಸ್ ಸರ್ಕಾರ ೨ನೇ ವರ್ಷದ ಸಾಧನ ಸಮಾವೇಶವನ್ನು ವಿಜಯನಗರ ಜಿಲ್ಲೆಯಲ್ಲಿ ಇದೇ ೨೦ ರಂದು ಹಮ್ಮಿಕೊಳ್ಳಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಹೇಳಿದ್ದಾರೆ. ಹೊಸಪೇಟೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಜಯನಗರ ಜಿಲ್ಲೆಯನ್ನು ಅಭಿsವೃದ್ಧಿ ಮಾಡುವ ಉದ್ದೇಶದಿಂದ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಧ್ವನಿ: ಡಿ.ಕೆ.ಶಿವಕುಮಾರ್ ( ೩೬ ಸೆಕೆಂಡ್ಸ್)

ತುಂಗಭದ್ರಾ ಜಲ ವಿವಾದಕ್ಕೆ ಸಂಬಂಧಪಟ್ಟಂತೆ ಆಂಧ್ರ ಪ್ರದೇಶ, ತೆಲಗಾಂಣ ಮುಖ್ಯಮಂತ್ರಿಗಳೊಂದಿಗೆ ಸಮಾಲೋಚನೆ ನಡೆಸಲಾಗಿದೆ. ಜಲಾಶಯದ ಹೂಳಿನ ಸಮಸ್ಯೆ ಮತ್ತು ನೀರಿನ ಸಂಗ್ರಹ ಕೊರತೆ ನೀಗಿಸಲು ಕೊಪ್ಪಳ ಜಿಲ್ಲೆಯಲ್ಲಿ ಸಮಾನಾಂತರ ಜಲಾಶಯ ನಿರ್ಮಾಣ ಮಾಡುವ ಬಗ್ಗೆ ಆಂಧ್ರ

ಪ್ರದೇಶ ಮತ್ತು ತೆಲಂಗಾಣ ಮುಖ್ಯಮಂತ್ರಿಗಳೊಂದಿಗೆ ಸಮಾಲೋಚನೆ ನಡೆಸಲಾಗುವುದು ಎಂದು ಬಳ್ಳಾರಿ ಜಿಲ್ಲೆಯ ತೋರಣಗಲ್ ವಿಮಾನ ನಿಲ್ದಾಣದಲ್ಲಿ ಡಿ ಕೆ ಶಿವಕುಮಾರ್ ತಿಳಿಸಿದರು.

<><*<><>*><>

ದೇಶದ ಸೈನಿಕರಿಗೆ ಗೌರವ ಸಲ್ಲಿಸಲು ತಿರಂಗಾ ಯಾತ್ರೆ ನಡೆಸಲಾಗುತ್ತಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಪರೇಷನ್ ಸಿಂದೂರ ಕಾರ್ಯಚರಣೆ ಬಗ್ಗೆ ರಾಜಕೀಯ ಪಕ್ಷಗಳಲ್ಲಿ ಅಪಸ್ವರ ಬರಬಾರದು. ದೇಶದ ಏಕತೆ ರಕ್ಷಣೆ ಮತ್ತು ಯೋಧರ ಕಾರ್ಯಚರಣೆ ವಿಚಾರದಲ್ಲಿ ಎಲ್ಲರ ನಿಲುವು ಒಂದೇ ಆಗಿರಬೇಕು.

ಭಾರತೀಯ ಸೇನಾಧಿಕಾರಿಗಳ ಬಗ್ಗೆ ಯಾರು ಹಗರವಾಗಿ ಮತ್ತು ಇಲ್ಲಸಲ್ಲದ ಟೀಕೆ ಮಾಡಬಾರದು ಎಂದು ಪ್ರಹ್ಲಾದ್ ಜೋಶಿ ಆಗ್ರಹಿಸಿದ್ದಾರೆ.

<><*<><>*><>

ಪಾಕ್ ಉಗ್ರರ ವಿರುದ್ಧ ಭಾರತೀಯ ಸೈನಿಕರು ನಡೆಸಿದ ಅಪರೇಷನ್ ಸಿಂದೂರ ಕಾರ್ಯಚರಣೆ ಯಶಸ್ವಿ ಹಿನ್ನೆಲೆಯಲ್ಲಿ ಮೈಸೂರಿನಲ್ಲಿಂದು ತಿರಂಗಾ ಯಾತ್ರೆ ಏರ್ಪಡಿಸಲಾಗಿತ್ತು. ಬಿಜೆಪಿಯಿಂದ ಏರ್ಪಡಿಸಿದ್ದ ಯಾತ್ರೆಯಲ್ಲಿ ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ ಸಾವಿರಾರು ಜನ ಭಾಗಿಯಾಗಿದ್ದರು. ಅಪರೇಷನ್ ಸಿಂದೂರ್ ಕಾರ್ಯಚರಣೆ ಯಶಸ್ವಿ ಹಾಗೂ ಯೋಧರಿಗೆ ನೈತಿಕ ಬೆಂಬಲ ನೀಡಲು ಹುಬ್ಬಳ್ಳಿ-ದಾರವಾಡ ಮಹಾನಗರದಲ್ಲೂ ಇಂದು ತಿರಂಗಾ ಯಾತ್ರೆ ನಡೆಸಲಾಯಿತು. ೩ ಸಾವಿರ ಮಠದಿಂದ ಯಾತ್ರೆ ಪ್ರಾರಂಭವಾಯಿತು. ಮೆರವಣಿಗೆ ಉದ್ದಕ್ಕೂ ದೇಶಪ್ರೇಮದ ಘೋಷಣೆ ಮೊಳಗಿದವು.

<><*<><>*><>

ಪಾಕ್ ಉಗ್ರರ ವಿರುದ್ಧ  ನಡೆಸಿದ ಅಪರೇಷನ್ ಸಿಂದೂರ ಕಾರ್ಯಚರಣೆ ಯಶಸ್ವಿಯಾದ ಹಿನ್ನೆಲೆಯಲ್ಲಿ ಮಂಡ್ಯ ಜಿಲ್ಲೆ ದಂಪತಿಯೊಬ್ಬರು ತಮ್ಮ ಹೆಣ್ಣು ಮಗುವಿಗೆ ಸಿಂದೂರಿ ಎಂದು ನಾಮಕರಣ ಮಾಡಿ ದೇಶಪ್ರೇಮ ಮೆರೆದಿದ್ದಾರೆ. ಈ ಕುರಿತು ಸ್ಥಳೀಯ ಮುಖಂಡ ಶಂಕರ ಬಾಬು ಮಾತನಾಡಿ, ಅಪರೇಷನ್ ಸಿಂದೂರ ಕಾರ್ಯಚರಣೆ ಯಶಸ್ಸಿನ ಸಂಕೇತವಾಗಿ ಮಗುವಿಗೆ ಸಿಂದೂರಿ ಎಂದು ನಾಮಕರಣ ಮಾಡಿದ್ದು ಸಂತಸದ ವಿಚಾರ. ಇವರ ದೇಶಪ್ರೇಮ ಇತರರಿಗೆ ಮಾದರಿಯಾಗಲಿ ಎಂದು ಅನಿಸಿಕೆ ಹಂಚಿಕೊಂಡಿದ್ದಾರೆ.

ಧ್ವನಿ - ಶಂಕರ ಬಾಬು

<><*<><>*><>

ಮಂಗಳೂರಿನ ನೈಋತ್ಯಕ್ಕೆ ಸುಮಾರು ೬೦-೭೦ ನಾಟಿಕಲ್ ಮೈಲುಗಳಷ್ಟು ದೂರದಲ್ಲಿ ಮುಳುಗಿದ ಎಂಎಸ್‌ವಿ ಸಲಾಮತ್ ಎಂಬ ಸರಕು ಸಾಗಣೆ ಹಡಗಿನಲ್ಲಿದ್ದ ಆರು ಸಿಬ್ಬಂದಿಯನ್ನು ಭಾರತೀಯ ಕರಾವಳಿ ರಕ್ಷಣಾ ಪಡೆ (ಐಸಿಜಿ) ಯಶಸ್ವಿಯಾಗಿ ರಕ್ಷಣೆ ಮಾಡಿದೆ.

<><*<><>*><>

ಮಂಗಳೂರಿನ ನೈಋತ್ಯಕ್ಕೆ ಸುಮಾರು ೬೦-೭೦ ನಾಟಿಕಲ್ ಮೈಲುಗಳಷ್ಟು ದೂರದಲ್ಲಿ ಮುಳುಗಿದ ಎಂಎಸ್‌ವಿ ಸಲಾಮತ್ ಎಂಬ ಸರಕು ಸಾಗಣೆ ಹಡಗಿನಲ್ಲಿದ್ದ ಆರು ಸಿಬ್ಬಂದಿಯನ್ನು ಭಾರತೀಯ ಕರಾವಳಿ ರಕ್ಷಣಾ ಪಡೆ (ಐಸಿಜಿ) ಯಶಸ್ವಿಯಾಗಿ ರಕ್ಷಣೆ ಮಾಡಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>